ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12

ಸಂಖ್ಯೆ:ಪಪೂಶಿಇ/ಪರೀಕ್ಷೆ/ದ್ವಿಸ್ಥಾಪ/2020-21 ದಿನಾಂಕ:23-04-2021

ಸುತ್ತೋಲೆ

ವಿಷಯ: 2020-21ನೇ ಸಾಲಿನ ಪದವಿ ಪೂರ್ವ ಶಿಕ್ಷಣ ಇಲಾಖೆಯ ದ್ವಿತೀಯ ಪಿಯುಸಿ ಪ್ರಾಯೋಗಿಕ ಪರೀಕ್ಷೆಗಳನ್ನು ನಡೆಸುವ ಬಗ್ಗೆ.

ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಉಪನಿರ್ದೇಶಕರುಗಳು, ದಿನಾಂಕ 28.04.2021ರಿಂದ 18.05.2021ರ ವರೆಗೆ ನಡೆಯಬೇಕಿರುವ 2021ನೇ ಸಾಲಿನ ದ್ವಿತೀಯ ಪಿಯುಸಿ ಪ್ರಾಯೋಗಿಕ ಪರೀಕ್ಷೆಗಳನ್ನು ನಡೆಸುವ ಬಗ್ಗೆ ಈ ಕೆಳಕಂಡಂತೆ ಕ್ರಮಗಳನ್ನು ಕೈಗೊಳ್ಳಲು ಸೂಚಿಸಿದೆ.

1. ದ್ವಿತೀಯ ಪಿಯುಸಿ ಪ್ರಾಯೋಗಿಕ ಪರೀಕ್ಷೆಗಳನ್ನು ಆಯಾ ಕಾಲೇಜಿನ ಹಂತದಲ್ಲಿಯೇ ನಡೆಸುವಂತೆ ತಮ್ಮ ಜಿಲ್ಲೆಯ ಪ್ರಾಚಾರ್ಯರುಗಳಿಗೆ ಮಾಹಿತಿ ನೀಡುವುದು. ಪ್ರತಿ ದಿನ ಪರೀಕ್ಷೆ ಮುಗಿದ ನಂತರ ತಮಗೆ ನಿಯೋಜಿಸಿದ ಪರೀಕ್ಷಾ ಕೇಂದ್ರದಲ್ಲಿ ಅಂಕಗಳನ್ನು ON-LINE ಮೂಲಕ ನಮೂದಿಸಲು ಆಯಾ ಕಾಲೇಜಿನ ಪ್ರಾಂಶುಪಾಲರಿಗೆ ಸೂಕ್ತ ಮಾರ್ಗದರ್ಶನ ನೀಡುವುದು.

   ಪ್ರಾಯೋಗಿಕ ಪರೀಕ್ಷೆಗಳನ್ನು ವಿದ್ಯಾರ್ಥಿಗಳು ವ್ಯಾಸಂಗ ಮಾಡುವ ಕಾಲೇಜುಗಳಲ್ಲಿಯೆ ನಡೆಸಲು ತೀರ್ಮಾನಿಸಿರುವುದರಿಂದ, ವಿದ್ಯಾರ್ಥಿಗಳಿಗೆ ತುರ್ತಾಗಿ ಮತ್ತು ಎಲ್ಲ ಮಾಧ್ಯಮಗಳಲ್ಲಿ ಈ ಮಾಹಿತಿಯನ್ನು ತಲುಪಿಸಲು ಕ್ರಮವಹಿಸುವುದು. ಯಾವುದೇ ವಿದ್ಯಾರ್ಥಿಯು ಮಾಹಿತಿಯ ಕೊರತೆಯಿಂದ ಪರೀಕ್ಷೆಗೆ ಹಾಜರಾಗಲು ಸಾಧ್ಯವಾಗದಿದ್ದಲ್ಲಿ ಪ್ರಾಂಶುಪಾಲರೇ ನೇರ ಜವಾಬ್ದಾರರಾಗುತ್ತಾರೆ.

   ಪ್ರಾಯೋಗಿಕ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳಿಂದ covid –ve report ಪಡೆಯಬಾರದು. ಕಾಲೇಜಿಗೆ ಪರೀಕ್ಷೆ ಬರೆಯಲು ಬರುವ ವಿದ್ಯಾರ್ಥಿಗಳ ದೇಹದ ಉಷ್ಣತೆ ಪರೀಕ್ಷಿಸಿ ಒಳಗೆ ಪ್ರವೇಶ ನೀಡುವುದು.

2. ಈಗಾಗಲೇ ಪ್ರಾಯೋಗಿಕ ಪರೀಕ್ಷೆಯ ಲೇಖನ ಸಾಮಗ್ರಿಗಳನ್ನು ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ಪೂರೈಸಲಾಗಿದ್ದು ಪ್ರಾಯೋಗಿಕ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರುಗಳು ಇವುಗಳನ್ನು ಪಡೆದುಕೊಂಡು ತಮ್ಮ ಕೇಂದ್ರಕ್ಕೆ ಟ್ಯಾಗ್ ಆಗಿರುವ ಕಾಲೇಜುಗಳ ಪ್ರಾಂಶುಪಾಲರಿಗೆ ಆ ಕಾಲೇಜಿನ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಉತ್ತರ ಪತ್ರಿಕೆಗಳು ಮತ್ತು ಅಂಕಪಟ್ಟಿಯನ್ನು ನೀಡಿ ಪ್ರತಿದಿನ ಟ್ಯಾಗ್ ಆಗಿರುವ ಕಾಲೇಜುಗಳ ವಿವಿಧ ವಿಷಯಗಳ ಉಪನ್ಯಾಸಕರುಗಳು ಪ್ರಾಯೋಗಿಕ ಪರೀಕ್ಷಾ ಕೇಂದ್ರಕ್ಕೆ ಬಂದು ಅಂಕಗಳನ್ನು ನಮೂದಿಸುವುದು.

3. ಕಾಲೇಜುವಾರು ನಾಮಿನಲ್ ರೋಲ್ (NR) ಮತ್ತು ಅಂಕ ಪಟ್ಟಿ (OMR)ಗಳನ್ನು ON-LINE ಮೂಲಕ ಪ್ರಾಯೋಗಿಕ ಪರೀಕ್ಷಾ ಕೇಂದ್ರದ ಪ್ರಾಂಶುಪಾಲರಿಗೆ ದಿನಾಂಕ 23.04.2021ರಂದು ಕಳುಹಿಸಲಾಗುವುದು. ಪರೀಕ್ಷಾ ಕೇಂದ್ರದ ಮುಖ್ಯಸ್ಥರು ತಮ್ಮ ಪ್ರಾಯೋಗಿಕ ಪರೀಕ್ಷಾ ಕೇಂದ್ರಕ್ಕೆ ಲಗತ್ತಿಸಿರುವ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ನಾಮಿನಲ್ ರೋಲ್ ಮತ್ತು ಅಂಕ ಪಟ್ಟಿಯನ್ನು ನೀಡಿ ಪ್ರಾಯೋಗಿಕ ಪರೀಕ್ಷೆಯನ್ನು ತಮ್ಮ ಕಾಲೇಜು ಹಂತದಲ್ಲಿ ನಡೆಸಿ ಆಯಾ ದಿನದಂದೇ ಪ್ರಾಯೋಗಿಕ ಪರೀಕ್ಷಾ ಕೇಂದ್ರಕ್ಕೆ ಉತ್ತರ ಪತ್ರಿಕೆ ಮತ್ತು ಭರ್ತಿ ಮಾಡಿದ ಅಂಕ ಪಟ್ಟಿಗಳನ್ನು ಹಿಂದಿರುಗಿಸಿ ON-LINE ನಲ್ಲಿ ಪ್ರಾಯೋಗಿಕ ಪರೀಕ್ಷೆಯ ಅಂಕಗಳನ್ನು ನಮೂದಿಸುವುದು. ಪರೀಕ್ಷಾ ಕೇಂದ್ರದ ಎಲ್ಲಾ ಪರೀಕ್ಷೆಗಳು ಮುಗಿದ ನಂತರ ಉತ್ತರ ಪತ್ರಿಕೆಗಳನ್ನು ಬಂಡಲ್ ಮಾಡಿ ನೇರವಾಗಿ ಕೇಂದ್ರ ಕಛೇರಿಗೆ ಕಳುಹಿಸುವುದು ಮತ್ತು ಅಂಕಪಟ್ಟಿಗಳನ್ನು ಉಪನಿರ್ದೇಶಕರ ಕಛೇರಿಗೆ ಸಲ್ಲಿಸುವುದು.

4. ತಮ್ಮ ಕಾಲೇಜಿನ ಉಪನ್ಯಾಸಕರೇ ಆಂತರಿಕ ಪರೀಕ್ಷಕರಾಗಿ ಕರ್ತವ್ಯ ನಿರ್ವಹಿಸಿ ಪ್ರಾಯೋಗಿಕ ಪರೀಕ್ಷೆಯನ್ನು ಯಶಸ್ವಿಗೊಳಿಸಲು ಸೂಚಿಸಿದೆ. ಕೋವಿಡ್-19ರ ಹಿನ್ನೆಲೆಯಲ್ಲಿ ಬಾಹ್ಯಪರೀಕ್ಷಕರನ್ನು ನೇಮಿಸುವುದನ್ನು ನಿಷೇಧಿಸಿದೆ.
5. ಕಲಾ ಮತ್ತು ವಾಣಿಜ್ಯ ವಿಭಾಗದಲ್ಲಿ ಪ್ರಾಯೋಗಿಕ ಪರೀಕ್ಷೆ ನಡೆಸುವ ವಿಷಯಗಳಿದ್ದಲ್ಲಿ (ಉದಾ : ಗಣಕ ವಿಜ್ಞಾನ ಮತ್ತು ಗೃಹ ವಿಜ್ಞಾನ) ಕಾಲೇಜಿನ ಪ್ರಾಂಶುಪಾಲರು ನಿಗದಿತ ದಿನಾಂಕದೊಳಗೆ ಪರೀಕ್ಷೆ ನಡೆಸಲು ಸೂಚಿಸಿದೆ.
6. ಕಾಲೇಜುಗಳಲ್ಲಿ ಯಾವುದೇ ಕಾರಣಕ್ಕೂ ಪರೀಕ್ಷಾರ್ಥಿಗಳನ್ನು ಬಿಟ್ಟು ಬೇರೆ ವಿದ್ಯಾರ್ಥಿಗಳನ್ನು ಸೇರಿಸುವಂತಿಲ್ಲ. ಎಲ್ಲಾ ಸಂದರ್ಭಗಳಲ್ಲಿ ಹಾಗೂ ವಿಶೇಷವಾಗಿ ಪರೀಕ್ಷೆ ನಡೆಯುವ ದಿನಗಳಂದು ಇಲಾಖೆ ನೀಡಿರುವ SOPಯನ್ನು ಕಡ್ಡಾಯವಾಗಿ ಮತ್ತು ಕಟ್ಟುನಿಟ್ಟಿನಿಂದ ಪರಿಪಾಲಿಸುವುದು.
7. ಸರ್ಕಾರದ ಆದೇಶದಂತೆ ವಾರಾಂತ್ಯದಲ್ಲಿ ಸಂಪೂರ್ಣ ಲಾಕ್ ಡೌನ್ ಜಾರಿಯಲ್ಲಿರುವುದರಿಂದ ಶನಿವಾರ ಹಾಗೂ ಭಾನುವಾರಗಳಂದು ಪ್ರಾಯೋಗಿಕ ಪರೀಕ್ಷೆಗಳನ್ನು ನಡೆಸುವಂತಿಲ್ಲ.
8. ಕೇಂದ್ರ ಕಛೇರಿ ವತಿಯಿಂದ ಪ್ರಾಯೋಗಿಕ ಪರೀಕ್ಷೆಯ ಆಯ್ದ ಉತ್ತರ ಪತ್ರಿಕೆಗಳನ್ನು ಪರಿಶೀಲಿಸಲಾಗುವುದು. ಏನಾದರೂ ಮೌಲ್ಯಮಾಪನದಲ್ಲಿ ಲೋಪಗಳು ಕಂಡು ಬಂದಲ್ಲಿ ಸಂಬಂಧಿಸಿದ ಪ್ರಾಂಶುಪಾಲರನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು.
9. ದ್ವಿತೀಯ ಪಿಯುಸಿ ಪೂರ್ವ ಸಿದ್ದತಾ ಪರೀಕ್ಷೆಯನ್ನು ರದ್ದುಪಡಿಸಲಾಗಿದ್ದು, ವಿದ್ಯಾರ್ಥಿಗಳಿಗೆ ಈಗಾಗಲೇ ಸಿದ್ದಪಡಿಸಿ ಉಳಿದಿರುವ ವಿಷಯಗಳ ಪ್ರಶ್ನೆ ಪತ್ರಿಕೆಗಳನ್ನು ನೀಡಿ ಮನೆಯಲ್ಲಿಯೇ ಅಭ್ಯಾಸ ಮಾಡಲು ಸೂಚಿಸುವಂತೆ ಪ್ರಾಚಾರ್ಯರಿಗೆ ಸೂಕ್ತ ನಿರ್ದೇಶನ ನೀಡುವುದು.
10. ಜಿಲ್ಲಾ ಖಜಾನೆ ಹಾಗೂ ಐದು ಉಪಖಜಾನೆಗಳಲ್ಲಿ ಉಳಿದಿರುವ ಹಿಂದಿನ ವರ್ಷಗಳ ಪ್ರಶ್ನೆಪತ್ರಿಕೆಗಳನ್ನು ಖಜಾನೆಗಳಿಂದ ಹೊರತೆಗೆದು ಉಪನಿರ್ದೇಶಕರ ಕಚೇರಿಯಲ್ಲಿ ಅಥವಾ ಕೇಂದ್ರಸ್ಥಾನದಲ್ಲಿರುವ ಯಾವುದಾದರೊಂದು ಪದವಿ ಪೂರ್ವ ಕಾಲೇಜಿನಲ್ಲಿ ಸಂಗ್ರಹಿಸಿ ಇಡುವುದು. ಇವುಗಳನ್ನು ಮುಂದಿನ ಶೈಕ್ಷಣಿಕ ಸಾಲಿನಲ್ಲಿ ವಿದ್ಯಾರ್ಥಿಗಳಿಗೆ ಅಭ್ಯಾಸಕ್ಕೆ ನೀಡಲು ಸೂಚಿಸಲಾಗಿದೆ.

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ

ಪ್ರತಿಗಳು,

1. ನಿರ್ದೇಶಕರ ಆಪ್ತ ಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು.
2. ಜಂಟಿ ನಿರ್ದೇಶಕರು, ಆಡಳಿತ/ ಪರೀಕ್ಷೆ/ ಮಾನ್ಯತೆ ಮತ್ತು ಅನುದಾನ/ ಶೈಕ್ಷಣಿಕ ಶಾಖೆ/ ಇವರ ಸೂಕ್ತ ಮಾಹಿತಿಗಾಗಿ,
3. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ/ ಮಾಹಿತಿಗಾಗಿ ಹಾಗೂ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು.
4. ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರುಗಳಿಗೆ (ವಿದ್ಯಾರ್ಥಿಗಳಿಗೆ ಈ ಕುರಿತು ಸೂಕ್ತ ಮಾಹಿತಿಯನ್ನು ನೀಡಲು ಸೂಚಿಸಿದೆ.)
5. ಗಣಕ ಶಾಖೆ/ ಇ-ಆಡಳಿತ/ ಇಲಾಖಾ ವೆಬ್‌ಸೈಟ್ ನಲ್ಲಿ ಪ್ರಕಟಿಸಲು ಮತ್ತು ಎಲ್ಲಾ ಮಾಧ್ಯಮಗಳಲ್ಲಿ ಪ್ರಕಟವಾಗುವಂತೆ ಕ್ರಮವಹಿಸುವುದು.